# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಹೆಚ್.ಎ.ಎಲ್ ಏರ್‌ಪೋರ್ಟ್

ಉಪವಿಭಾಗ ಮಹದೇವಪುರ ವಲಯ, ಬೆಂಗಳೂರು

ಸಂಖ್ಯೆ:ಬಿಬಿಎಂಪಿ/ಸ.ಕಾ.ಅ/ಹೆಚ್.ಎ.ಎಲ್/ಪಿಆರ್/06/2020-21 ದಿನಾಂಕ: 25-05-2021

## ವಾರ್ಡ್ ಸಮಿತಿ ಸಭೆಯ ನಡಾವಳಿಗಳು.

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಾನ್ಯ ಆಯುಕ್ತರು ಕಛೇರಿ ಆದೇಶ ಸಂ: ಐ12(5)/ಪಿಆರ್/35/2020-21 ದಿನಾಂಕ:04/12/2020, ಆದೇಶದಂತೆ ದಿನಾಂಕ;25.05.2021 ರಂದು ನೋಡಲ್ ಅಧಿಕಾರಿ ಶ್ರೀ.ಟಿ.ಎಂ.ನಾರಾಯಣಸ್ವಾಮಿ, ಸಹಾಯಕ ಕಾರ್ಯಪಾಲಕ ಅಭಿಯಂತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,ಇವರ ಅಧ್ಯಕ್ಷತೆಯಲ್ಲಿ ಹೆಚ್.ಎ.ಎಲ್ ಏರ್‌ಪೋರ್ಟ್ ಉಪವಿಭಾಗದ ವಾರ್ಡ್-56 ಎ.ನಾರಾಯಣಪುರ ವಾರ್ಡ್ ಕಛೇರಿಯಲ್ಲಿ ವಾರ್ಡ್ ಸಮಿತಿ ನಡೆಸಿದ ಸಭೆಯ ನಡಾವಳಿಗಳು ಈ ಕೆಳಕಂಡಂತೆ ಇರುತ್ತದೆ.

ಉಪಸ್ಥಿತರು:

| ಕ್ರ.ಸಂ | ಹೆಸರು | ಹುದ್ದೆ |
|---|---|---|
| | ಅಧಿಕಾರಿಗಳು | |
| 1 | ಶ್ರೀ.ಟಿ.ಎಂ.ನಾರಾಯಣಸ್ವಾಮಿ | ವಾರ್ಡ್ ಸಮಿತಿ ಸಭೆಯ ನೋಡಲ್ ಅಧಿಕಾರಿ ವಾ.ನಂ.56, ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿಬಿಎಂಪಿ |
| 2 | ಶ್ರೀ.ಜಿ.ಡಿ.ಸೋಮಯ್ಯ | ವಾರ್ಡ್ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ನಂ.56 ಎ.ನಾರಾಯಣಪುರ |
| 3 | ಶ್ರೀಮತಿ.ಅಮೃತ ನಾಯಕ್ | ಮೌಲ್ಯಮಾಪಕರು,ಬಿಬಿಎಂಪಿ ಕಂದಾಯ ನಿರೀಕ್ಷಕರು ವಾರ್ಡ್ ನಂ.56 |
| 4 | ಶ್ರೀಮತಿ.ಅಂಜಲಿ | ಆರೋಗ್ಯ ಅಧಿಕಾರಿ ವಾರ್ಡ್ ನಂ 56 ಪ್ರಾಥಮಿಕ ಆರೋಗ್ಯ ಕೇಂದ್ರ ಎ.ನಾರಾಯಣಪುರ |
| 5 | ಶ್ರೀ. ಅಮಿತ್.ಬಿ.ಸಿ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ 56 |
| 6 | ಶ್ರೀ.ರಾಘವೇಂದ್ರ | ಹಿರಿಯ ಆರೋಗ್ಯ ಪರಿವೀಕ್ಷಕರು |
| 7 | ಶ್ರೀ.ಮಹಮ್ಮದ್ ಮುದಾಸೀರ್ | ಸಹಾಯಕ ಅಭಿಯಂತರರು ಬಿ.ಡಬ್ಲ್ಯು.ಎಸ್.ಎಸ್.ಬಿ |
| | | |
| | ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು | |
| 8 | ಶ್ರೀ.ಸುರೇಶ್ .ವಿ | ಎ-ನಾರಾಯಣಪುರ |
| 9 | ಶ್ರೀಹರೀಶ್ | ಎ-ನಾರಾಯಣಪುರ |
| 10 | ಶ್ರೀ.ಸುನಿಲ್ | ಎ-ನಾರಾಯಣಪುರ |
| 11 | ಶ್ರೀ.ಚಿಟ್ಟಿ | ಎ-ನಾರಾಯಣಪುರ |
| 12 | ಶ್ರೀ.ಪ್ರದೀಪ್ ರೆಡ್ಡಿ | ಎ-ನಾರಾಯಣಪುರ |

Scanned with CamScanner

**1.ಕೋವಿಡ್-19ರ ಸಂಬಂದಿಸಿದ ಸಾಂಕ್ರಮಿಕ ರೋಗ ನಿಯಂತ್ರಣ ಮತ್ತು ನಿರ್ವಹಣೆ ಬಗ್ಗೆ ಕೈಗೊಂಡಿರುವ ಕ್ರಮಗಳ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ಗೆ ಸಂಬಂಧಿಸಿದ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯ ಅಧಿಕಾರಿಗಳು ವಾರ್ಡ್‌ನಲ್ಲಿ ಕೋವಿಡ್-19 ಸಂಬಂಧಪಟ್ಟ ಸೋಂಕು ಹರಡುವುದನ್ನು ತಡೆಗಟ್ಟುವ ಎಲ್ಲಾ ಮುಂಜಾಗ್ರತ ಕ್ರಮಗಳನ್ನು ತೆಗೆದುಕೊಳ್ಳುತ್ತಿರುವುದಾಗಿ ತಿಳಿಸಿರುತ್ತಾರೆ, ಈ ಬಗ್ಗೆ ಸೋಂಕು ಹರಡುವುದನ್ನು ತಡೆಗಟ್ಟುವ ಸಲುವಾಗಿ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ತೀರ್ಮಾನಿಸಿ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಮತ್ತು ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

**2.ಕೋವಿಡ್-19ರ ಲಸಿಕಾ ಕಾರ್ಯಕ್ರಮದ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ಗೆ ಸಂಬಂಧಿಸಿದ ಹಿರಿಯ ಆರೋಗ್ಯ ಅಧಿಕಾರಿಗಳು ಕೋವಿಡ್ ಲಸಿಕೆಯನ್ನು 45ವರ್ಷ ಮೇಲ್ಪಟ್ಟ ಸಾರ್ವಜನಿಕರಿಗೆ ಪ್ರತಿನಿತ್ಯವು 100 ರಿಂದ 150 ಜನರಿಗೆ ಲಸಿಕೆಯನ್ನು ನೀಡುತ್ತಿರುದ್ದಾಗಿ ತಿಳಿಸಿದರು. ಲಸಿಕೆಯನ್ನು ಅಧಿಕಗೊಳಿಸುವಂತೆ ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

**3. ಕೋವಿಡ್-19ರ ನಿಯಂತ್ರಣಕ್ಕಾಗಿ ಸ್ವಚ್ಚತೆ ಹಾಗೂ ಔಷದಿ ಸಿಂಪಡಣೆಯ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ಗೆ ಸಂಬಂಧಿಸಿದ ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್‌ನಲ್ಲಿ ಕೋವಿಡ್-19ರ ನಿಯಂತ್ರಣಕ್ಕಾಗಿ ಔಷದಿ ಸಿಂಪಡಣೆಯನ್ನು ಕಂಟೈನ್ಮೆಂಟ್ ಜೋನ್‌ಗಳಲ್ಲಿ ಪ್ರತಿದಿನವು ಮಾಡುತ್ತಿರುವುದಾಗಿ ತಿಳಿಸಿರುತ್ತಾರೆ. ಈ ಬಗ್ಗೆ ಸೋಂಕು ಹರಡುವುದನ್ನು ತಡೆಗಟ್ಟುವ ಸಲುವಾಗಿ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ತೀರ್ಮಾನಿಸಿ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಮತ್ತು ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

**4. ಕೋವಿಡ್-19ರ ನಿಯಂತ್ರಣಕ್ಕಾಗಿ . ಕೋವಿಡ್-19ರ ಪಾಸಿಟಿವ್ ಪೇಸೆಂಟ್‌ಗಳಿಗೆ ಮಾತ್ರೆ ಔಷದಿ ಇತ್ಯಾದಿಗಳನ್ನು ಒದಗಿಸುವ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ಗೆ ಸಂಬಂಧಿಸಿದ ಹಿರಿಯ ಆರೋಗ್ಯ ಅಧಿಕಾರಿಗಳು ವಾರ್ಡ್‌ನಲ್ಲಿ ಕೋವಿಡ್-19ರ ಪಾಸಿಟಿವ್ ಪೇಸೆಂಟ್‌ಗಳಿಗೆ ಅವಶ್ಯಕತೆ ಇರುವ ಮಾತ್ರೆ ಔಷದಿ ಇತ್ಯಾದಿಗಳನ್ನು ಒದಗಿಸುತ್ತಿರುದಾಗಿ ತಿಳಿಸಿದರು. ಔಷದಿಗಳನ್ನು ಸರಿಯಾದ ಸಮಯಕ್ಕೆ ನೀಡುವಂತೆ ಚರ್ಚಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.56 ಎ.ನಾರಾಯಣಪುರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

25/5/21
ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು
ಸಹಾಯಕ ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

Scanned with CamScanner